Akashvani : Bangalore
Regional Bulletin In Kannada
13.10.2025 / 6.40 pm
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

13.10.2025 / 6.40 pm
<><*<><>*><>
ಮುಖ್ಯಾಂಶಗಳು :

೧. ಮುಖ್ಯಮಂತ್ರಿಯಾಗಲು ಹೈಕಮಾಂಡ್ ಜೊತೆಗೆ ಶಾಸಕರ ಬೆಂಬಲ ಮುಖ್ಯ - ಮುಖ್ಯಮಂತ್ರಿ ಸಿದ್ದರಾಮಯ್ಯ

೨. ಧಾರವಾಡದಲ್ಲಿ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಅವರಿಂದ ನಾಳೆ ಬಯೋನೆಸ್ಟ್ ಇನ್‌ಕ್ಯೂಬೇಷನ್ ಕೇಂದ್ರ ಲೋಕಾರ್ಪಣೆ

೩. ಗ್ಯಾರಂಟಿ ಯೋಜನೆ ಬಗ್ಗೆ ಶಾಸಕ ಆರ್.ವಿ.ದೇಶಪಾಂಡೆ ಹೇಳಿಕೆ ಹಿನ್ನೆಲೆ- ಸ್ಪಷ್ಟನೆ ಕೇಳಿದ ಸರ್ಕಾರ

೪. ಬಾರ್ಬಡೋಸ್ ಸಂಸತ್ತಿಗೆ ಭೇಟಿ ನೀಡಿದ ಸಭಾಧ್ಯಕ್ಷ ಯು.ಟಿ. ಖಾದರ್ , ಸಭಾಪತಿ ಬಸವರಾಜ ಹೊರಟ್ಟಿ

೫. ನವದೆಹಲಿಯಲ್ಲಿಂದು ಪ್ರಧಾನಿ ಭೇಟಿಯಾದ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ

*************

ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನಲ್ಲಿ ಇಂದು ಸಚಿವರಿಗೆ ಭೋಜನ ಕೂಟ ಆಯೋಜಿಸಿದ್ದಾರೆ. ಮುಖ್ಯಮಂತ್ರಿಗಳ ಅಧಿಕೃತ ನಿವಾಸ 'ಕಾವೇರಿ'ಯಲ್ಲಿ ಭೋಜನ

ಕೂಟ ಆಯೋಜಿಸಲಾಗಿದೆ. ಎಲ್ಲಾ ಸಂಪುಟ ಸಹೋದ್ಯೋಗಿಗಳನ್ನು ಭೋಜನಕೂಟಕ್ಕೆ ಆಹ್ವಾನಿಸಿದ್ದಾರೆ. ಕಳೆದ ಎರಡೂವರೆ ವರ್ಷಗಳಲ್ಲಿ ಜಾರಿಗೆ ತಂದಿರುವ ಖಾತರಿ ಯೋಜನೆಗಳ ಯಶಸ್ಸಿನ ಬಗ್ಗೆ ಹಾಗೂ ಜಾತಿ ಜನಗಣತಿಯ ನಂತರ ಸರ್ಕಾರ ಎದುರಿಸಬೇಕಾದ ಸವಾಲುಗಳು, ವಿಶೇಷವಾಗಿ ಮೀಸಲಾತಿ ಮತ್ತು ಸಂಬಂಧಿತ ವಿಷಯಗಳಲ್ಲಿನ ಗಮನಾರ್ಹ ಬದಲಾವಣೆಗಳ ಬಗ್ಗೆ ಚರ್ಚಿಸುವ ಸಾಧ್ಯತೆಯಿದೆ.

*************

ಆರ್‌ಎಸ್‌ಎಸ್ ಕಾರ್ಯಕ್ರಮಗಳಿಗೆ ಸರ್ಕಾರದ ಜಾಗ ನೀಡದಿರುವಂತೆ ಸಚಿವ ಪ್ರಿಯಾಂಕ್ ಖರ್ಗೆ ಪತ್ರ ಬರೆದಿದ್ದು, ಪರಿಶೀಲಿಸುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿ ಅವರಿಗೆ ಸೂಚಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬಾಗಲಕೋಟೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಬದಲಾವಣೆ ವಿಚಾರದಲ್ಲಿ ಹೈಕಮಾಂಡ್ ನಿರ್ಧಾರವೇ ಅಂತಿಮ. ಹೈಕಮಾಂಡ್ ಜೊತೆ ಶಾಸಕರ ಬೆಂಬಲ ಹಾಗೂ ನಿರ್ಧಾರವೂ ಮುಖ್ಯ ಎಂದು ಸ್ಪಷ್ಟಪಡಿಸಿದ್ದಾರೆ. ಇಂದಿನ ಭೋಜನ ಕೂಟಕ್ಕೂ ಸಂಪುಟ ಪುನರ್ರಚನೆಗೆ ಸಂಬಂಧವಿಲ್ಲ ಎಂದು ತಿಳಿಸಿದ್ದಾರೆ.

**ಧ್ವನಿ : ಮುಖ್ಯಮಂತ್ರಿ ಸಿದ್ಧರಾಮಯ್ಯ**

*************

ಕೇಂದ್ರ ಹಣಕಾಸು ಹಾಗೂ ಕಾರ್ಪೊರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ನಾಳೆಯಿಂದ ನಾಲ್ಕು ದಿನಗಳ ಕಾಲ ರಾಜ್ಯ ಪ್ರವಾಸ ಕೈಗೊಳ್ಳಲಿದ್ದಾರೆ. ನಾಳೆ ಅವರು ಧಾರವಾಡದಲ್ಲಿ ಬಯೋನೆಸ್ಟ್ ಇನ್ ಕ್ಯೂಬೇಷನ್ ಕೇಂದ್ರದ ಉದ್ಘಾಟನೆಯನ್ನು ನೆರವೇರಿಸಿ, ಬಳಿಕ ಐಐಟಿ ಧಾರವಾಡದ

ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಲಿದ್ದಾರೆ. ಈ ಕುರಿತಂತೆ ಆಕಾಶವಾಣಿಗೆ ಧಾರವಾಡ ಐಐಟಿ ಆಡಳಿತ ಮುಖ್ಯಸ್ಥರಾದ ಪ್ರೊಫೆಸರ್ ದಿಲೀಪ್ ಎ.ಡಿ. ಹೆಚ್ಚಿನ ಮಾಹಿತಿ ನೀಡಿದ್ದಾರೆ.

**ಧ್ವನಿ : ಪ್ರೊ. ದಿಲೀಪ್ ಎ ಡಿ( ೩೦ ಸೆಕೆಂಡುಗಳು)**

ತಮ್ಮ ನಾಲ್ಕು ದಿನಗಳ ರಾಜ್ಯ ಭೇಟಿಯಲ್ಲಿ ಅವರು, ಕೊಪ್ಪಳ, ರಾಯಚೂರು, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳಲ್ಲಿ ರೈತ ತರಬೇತಿ ಕೇಂದ್ರ ಹಾಗೂ ಕೃಷಿ ಸಂಸ್ಕರಣ ಘಟಕಗಳ ಉದ್ಘಾಟನೆಯನ್ನು ನೆರವೇರಿಸಲಿದ್ದಾರೆ. ಹಂಪಿಯ ವಿರೂಪಾಕ್ಷ ದೇವಾಲಯಕ್ಕೂ ಸಚಿವರು ಭೇಟಿ ನೀಡಲಿದ್ದಾರೆ. ಬಳ್ಳಾರಿಯ ಬಾಗೇವಾಡಿಯಲ್ಲಿ ಗ್ರಾಮ ಪಂಚಾಯಿತಿ ಗ್ರಂಥಾಲಯಕ್ಕೆ ಭೇಟಿ ನೀಡಿ, ಸಚಿವರು ಪರಿಶೀಲನೆ ನಡೆಸಲಿದ್ದಾರೆ.

*************

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾಗಿರೋ ಗ್ಯಾರಂಟಿ ಯೋಜನೆಗಳ ಬಗ್ಗೆ ಸ್ವಪಕ್ಷೀಯ ಶಾಸಕ ಆರ್.ವಿ. ದೇಶಪಾಂಡೆ ನೀಡಿದ ಹೇಳಿಕೆ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ಮಾಡಿ ಸ್ಪಷ್ಟನೆ ಕೇಳಿದ್ದಾರೆ. ಈ ಹಿನ್ನೆಲೆಯಲ್ಲಿ ಮಾಧ್ಯಮ ಪ್ರಕಟಣೆ ಮೂಲಕ ಆರ್.ವಿ. ದೇಶಪಾಂಡೆ ಸ್ಪಷ್ಟನೆ ನೀಡಿದ್ದಾರೆ. ದಾಂಡೇಲಿಯಲ್ಲಿ ನಡೆದ ಸಭೆಯಲ್ಲಿ ಗ್ಯಾರಂಟಿ ಯೋಜನೆಗಳ ವಿರುದ್ಧ ಮಾತನಾಡಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ನಾಳೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರನ್ನು ಭೇಟಿಯಾಗಿ ಸ್ಪಷ್ಟನೆ ನೀಡಲು ನಿರ್ಧರಿಸಿದ್ದಾರೆ.

*************

೬೮ನೇ ಅಂತಾರಾಷ್ಟ್ರೀಯ ಕಾಮನ್‌ವೆಲ್ತ್ ಸಂಸದೀಯ ಸಮ್ಮೇಳನದಲ್ಲಿ ಭಾಗವಹಿಸಲು ಬಾರ್ಬಡೋಸ್‌ಗೆ ಭೇಟಿ ನೀಡಿದ ಸಂದರ್ಭದಲ್ಲಿ, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮತ್ತು ವಿಧಾನಸಭೆಯ ಸ್ಪೀಕರ್ ಯು.ಟಿ. ಖಾದರ್ ಬಾರ್ಬಡೋಸ್ ಸಂಸತ್ತಿಗೆ ಭೇಟಿ ನೀಡಿದ್ದಾರೆ. ಬಾರ್ಬಡೋಸ್ ಸಂಸತ್ತಿನ ಸಭಾಧ್ಯಕ್ಷರ ಪೀಠವನ್ನು ಭಾರತ ನೀಡಿದ್ದು, ಇದು ಭಾರತ ಮತ್ತು ಬಾರ್ಬಡೋಸ್ ನಡುವಿನ ಸ್ನೇಹ ಮತ್ತು ಸಂಸದೀಯ ಸಹಕಾರದ ಸಂಕೇತವಾಗಿದೆ. ಈ ಸಮ್ಮೇಳನವು ಬಾರ್ಬಡೋಸ್ ಶಾಸಕಾಂಗದ ಕಾರ್ಯನಿರ್ವಹಣೆಯನ್ನು ಅರ್ಥಮಾಡಿಕೊಳ್ಳಲು ಮತ್ತು ಅಂತರ್-ಸಂಸದೀಯ ಸಂಬಂಧಗಳನ್ನು ಬಲಪಡಿಸಲು ಮಹತ್ವದ ಅವಕಾಶವನ್ನು ಒದಗಿಸಿದೆ.

*************

ನವದೆಹಲಿಯಲ್ಲಿಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ ಜೊತೆಗಿನ ಫೋಟೊ ಹಂಚಿಕೊಂಡು ಪೋಸ್ಟ್ ಮಾಡಿರುವ ಅವರು, ಪ್ರಧಾನಿ ಭೇಟಿಯಾಗಿ ದೀಪಾವಳಿ ಶುಭಾಶಯ ತಿಳಿಸಿದೆ ಎಂದು ಹೇಳಿದ್ದಾರೆ. ಇದಕ್ಕೂ ಮುನ್ನ ಯಡಿಯೂರಪ್ಪ ಅವರು ಬಿಹಾರ ವಿಧಾನ ಸಭಾ ಚುನಾವಣೆ ಹಿನ್ನೆಲೆಯಲ್ಲಿ ನವದೆಹಲಿಯಲ್ಲಿ ನಡೆದ ಕೇಂದ್ರೀಯ ಸಂಸದೀಯ ಮಂಡಳಿ ಹಾಗೂ ಚುನಾವಣಾ ಸಮಿತಿ ಸಭೆಯಲ್ಲಿ ಪಾಲ್ಗೊಂಡಿದ್ದರು.

*************

ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ನೋಂದಾಯಿತ ಕುಟುಂಬಗಳ ಜಾಬ್ ಕಾರ್ಡ್ ಮಾನ್ಯತಾ ಅವಧಿಯನ್ನು ಇ-ಕೆವೈಸಿ ಮುಖಾಂತರ ಪೂರ್ಣಗೊಳಿಸಲಾಗುತ್ತಿದೆ. ಎಲ್ಲ ನರೇಗಾ ಕೂಲಿಕಾರ್ಮಿಕರು ಈ ಅಭಿಯಾನದಲ್ಲಿ

ಪಾಲ್ಗೊಂಡು ಕಡ್ಡಾಯವಾಗಿ ಇ-ಕೆವೈಸಿ ಪೂರ್ಣಗೊಳಿಸಲು ವಿಜಯಪುರ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ್ ಮನವಿ ಮಾಡಿದ್ದಾರೆ.

*************

ದೀಪಾವಳಿ ಹಬ್ಬ ಸಮೀಪಿಸುತ್ತಿರುವ ಹಿನ್ನಲೆಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಹಸಿರು ಪಟಾಕಿ ಮಾರಾಟ ಮತ್ತು ಬಳಕೆಗೆ ಮಾತ್ರ ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಎ.ಬಿ ಬಸವರಾಜು ತಿಳಿಸಿದ್ದಾರೆ. ಸುರಕ್ಷಿತ ಕ್ರಮಗಳೊಂದಿಗೆ ಪಟಾಕಿ ಮಾರಾಟ ಮಾಡಲು ಅನುಮತಿ ಕಡ್ಡಾಯವಾಗಿ ಪಡೆಯಬೇಕು ಎಂದು ಹೇಳಿದ್ದಾರೆ. ಹಬ್ಬದ ಸಂದರ್ಭದಲ್ಲಿ ರಾತ್ರಿ ೮ ಗಂಟೆಯಿಂದ ರಾತ್ರಿ ೧೦ ಗಂಟೆಯವರೆಗೆ ಮಾತ್ರ ಪಟಾಕಿಗಳನ್ನು ಸಿಡಿಸಲು ಅವಕಾಶ ನೀಡಲಾಗಿದ್ದು ಸಾರ್ವಜನಿಕರು ಪರಿಸರ ಸ್ನೇಹಿ ಹಸಿರು ಪಟಾಕಿ ಬಳಸಿ, ವಾಯುಮಾಲಿನ್ಯ ತಡೆಯಬೇಕು ಎಂದು ಸಲಹೆ ನೀಡಿದ್ದಾರೆ.

*************

ಬೆಂಗಳೂರಿನ ಮಣಿಪಾಲ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಗುಣಮುಖರಾಗಿ ಇಂದು ಮನೆಗೆ ಮರಳಿದ್ದಾರೆ. ವೈದ್ಯರ ಸೂಚನೆಯಂತೆ ದೇವೇಗೌಡರಿಗೆ ಇನ್ನೂ ೧೫ ದಿನ ವಿಶ್ರಾಂತಿ ಅಗತ್ಯವಿದೆ. ಹೀಗಾಗಿ ಮುಖಂಡರು, ಕಾರ್ಯಕರ್ತರು ಮತ್ತು ಅಭಿಮಾನಿಗಳು ಭೇಟಿ ಮಾಡಲು ಅವರ ನಿವಾಸಕ್ಕೆ ತೆರಳದಂತೆ ಮನವಿ ಮಾಡಿದ್ದಾರೆ.

*************

ಮಾನಸಿಕ ಯೋಗಕ್ಷೇಮ ಮತ್ತು ಆತ್ಮಹತ್ಯೆ ತಡೆಗಟ್ಟುವಿಕೆಗಾಗಿ ರಾಷ್ಟ್ರವ್ಯಾಪಿ ಅಭಿಯಾನವಾದ ಮಾನಸಿಕ ಆರೋಗ್ಯ ಸಂತೆ ೪.೦ ಇದೇ ೧೭ ಮತ್ತು ೧೮, ರಂದು ಬೆಂಗಳೂರಿನ ನಿಮ್ಹಾನ್ಸ್ ಕನ್ವೆನ್ಷನ್ ಸೆಂಟರ್‌ನಲ್ಲಿ ನಡೆಯಲಿದೆ.ಎರಡು ದಿನಗಳ ಈ ಕಾರ್ಯಕ್ರಮವು ಸಂವಾದಾತ್ಮಕ ಸ್ಟಾಲ್‌ಗಳು, ಚಲನಚಿತ್ರ ಪ್ರದರ್ಶನಗಳು, ಶೈಕ್ಷಣಿಕ ಪ್ರದರ್ಶನಗಳು, ಕವನ, ಔಷಧಾಲಯದಂತಹ ಸೃಜನಶೀಲ ಅನುಭವಗಳು, ಸಹಾಯವಾಣಿಗಳು ಮತ್ತು ಮಾನಸಿಕ ಆರೋಗ್ಯ ಸಂಪನ್ಮೂಲಗಳಿಗೆ ಪ್ರವೇಶ ಮತ್ತು ಜಾಗೃತಿ ಮತ್ತು ಯೋಗಕ್ಷೇಮವನ್ನು ಉತ್ತೇಜಿಸಲು ಸಮುದಾಯ ಚಟುವಟಿಕೆಗಳನ್ನು ಒಳಗೊಂಡಿರಲಿದೆ. ಈ ಕಾರ್ಯಕ್ರಮ ದೇಶಾದ್ಯಂತ ಶೈಕ್ಷಣಿಕ ಮನೋವೈದ್ಯಶಾಸ್ತ್ರ ಮತ್ತು ಮಾನಸಿಕ ಆರೋಗ್ಯ ಶಿಕ್ಷಣವನ್ನು ಬಲಪಡಿಸುವತ್ತ ಒಂದು ಪ್ರಮುಖ ಹೆಜ್ಜೆಯಾಗಿದೆ.

*************

ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆಯ ರಾಜ್ಯ ಸಚಿವರಾದ ವಿ.ಸೋಮಣ್ಣ ನಾಳೆ ಮಾನವ ಕಳ್ಳ ಸಾಗಣೆ ವಿರೋಧಿ ಕಾರ್ಯಗಾರ ಉದ್ಘಾಟಿಸಲಿದ್ದಾರೆ. ಬೆಂಗಳೂರಿನ ಕಬ್ಬನ್ ಪಾರ್ಕ್ ನಲ್ಲಿರುವ ರಾಜ್ಯ ಸರ್ಕಾರಿ ನೌಕರರ ಸಂಘದ ಸಭಾಂಗಣದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ. ರಾಷ್ಟ್ರೀಯ ಮಹಿಳಾ ಆಯೋಗದ ಅಧ್ಯಕ್ಷರಾದ ವಿಜಯ ಕೆ. ರಹಾಟ್ಕರ್ ಕಾರ್ಯಕ್ರಮದಲ್ಲಿ ಉಪಸ್ಥಿತರಿರಲಿದ್ದಾರೆ.

*************

ಯಾವುದೇ ಧರ್ಮ, ಜಾತಿಗೆ ಸೇರಿದರು ಬೇರೆ ಜಾತಿಯವರನ್ನು ಪ್ರೀತಿಸಬೇಕೆ ಹೊರತು, ದ್ವೇಷಿಸಬಾರದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬಾಗಲಕೋಟೆಯ ರಬಕವಿ ಬನಹಟ್ಟಿ ತಾಲೂಕಿನ ಬಂಡಿಗಣಿ ಗ್ರಾಮದಲ್ಲಿ ನಡೆದ

ವಿಶ್ವಶಾಂತಿಗಾಗಿ ಸರ್ವಧರ್ಮ ಮಹಾಸಂಗಮ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಮಾಜದಲ್ಲಿ ಜಾತಿ ವ್ಯವಸ್ಥೆಯಿಂದ ಗುಲಾಮಗಿರಿ ಮನೆ ಮಾಡಿದೆ ಎಂದು ಹೇಳಿದ್ದಾರೆ. ದೇಶದಲ್ಲಿ ಸಮಾನತೆ ಸಿಗುವರೆಗೂ ಸ್ವಾತಂತ್ರ್ಯ ಯಶಸ್ಸು ಕಾಣಲು ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

*************

ಹಿರಿಯ ನಟ ರಂಗಕರ್ಮಿ ರಾಜು ತಾಳಿಕೋಟೆ ಇಂದು ಹೃದಯಾಘಾತದಿಂದ ನಿಧನ ಹೊಂದಿದ್ದಾರೆ. ಉಡುಪಿಯ ಮಣಿಪಾಲ ಆಸ್ಪತ್ರೆಯಲ್ಲಿ ಅವರು ಕೊನೆ ಉಸಿರೆಳೆದಿದ್ದಾರೆ. ರಾಜು ತಾಳಿಕೋಟೆ ಅವರು ಧಾರವಾಡದ ರಂಗಾಯಣದ ನಿರ್ದೇಶಕರಾಗಿದ್ದರು. ವಿಜಯಪುರ ಜಿಲ್ಲೆಯ ಸಿಂದಗಿ ತಾಲ್ಲೂಕಿನ ಚಿಕ್ಕ ಸಿಂದಗಿ ಗ್ರಾಮದವರಾದ ರಾಜು ತಾಳಿಕೋಟೆ ಚಿತ್ರ ರಂಗದಲ್ಲಿ ಪ್ರಸಿದ್ಧಿ ಪಡೆದ ಬಳಿಕ ತಾಳಿಕೋಟೆ ನಗರದಲ್ಲಿ ವಾಸವಾಗಿದ್ದರು. ರಂಗಭೂಮಿಯಲ್ಲಿ ಅನುಭವ ಪಡೆದ ಬಳಿಕ ಅವರು ಕನ್ನಡ ಚಲನ ಚಿತ್ರ ರಂಗಕ್ಕೆ ಪ್ರವೇಶಿಸಿದ್ದರು.

*************

ಸರ್ಧಾರ್ ವಲ್ಲಭಬಾಯ್ ಪಟೇಲ್ ಅವರ ೧೫೦ನೇ ವರ್ಷಾಚರಣೆ ನಿಮಿತ್ತ ಬಿಜೆಪಿ ರಾಜ್ಯದಲ್ಲಿ ಏಕತಾ ನಡಿಗೆ ಪಾದಯಾತ್ರೆ ನಡೆಸಲು ನಿರ್ಧರಿಸಿದೆ. ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿ ನಡೆಸಿದ ಬಿಜೆಪಿ ರಾಜ್ಯ ಪ್ರದಾನ ಕಾರ್ಯದರ್ಶಿ ಪ್ರೀತಂ ಗೌಡ ಅವರು ಏಕತಾ ನಡಿಗೆಯ ಟೀ ಶರ್ಟ್ ಬಿಡುಗಡೆ ಮಾಡಿದರು. ಇದೇ ೩೧ರಿಂದ ನವಂಬರ್ ೨೫ರವರೆಗೆ ಪಟೇಲ್ ಅವರ ಕೊಡುಗೆಗಳ ಕುರಿತ ಚರ್ಚಾ ಸ್ಪರ್ಧೆ, ವಿಚಾರ ಸಂಕಿರಣ ಸೇರಿದಂತೆ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

*************